ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿನಾರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 20ನೇ ಫೆಬ್ರವರಿ, 2018

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:–**

1) ದಿನಾಂಕ: 09.02.2018ರ ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಶಿವಾನಂದ ಎಸ್. ಪಾಟೀಲ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ. 55(673) : ಇಂಧನ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಡಾ॥ ಎ.ಬಿ. ಮಾಲಕರೆಡ್ಡಿ (ಅಧ್ಯಕ್ಷರು, ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿ) ಅವರು ವಿಧಾನ ಮಂಡಲದ ಸಾರ್ವಜನಿಕ ಉದ್ಯಮಗಳ ಸಮಿತಿಯ 133ನೇ ವರದಿಯನ್ನೊಪ್ಪಿಸುವುದು.

3. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

1) **ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು :–**
   ಅ) 2018ನೇ ಸಾಲಿನ ಕರ್ನಾಟಕ ಆಧಾರ್ (ಹಣಕಾಸು ಮತ್ತು ಇತರೆ ಸಬ್ಸಿಡಿಗಳು, ಪ್ರಯೋಜನಗಳು ಮತ್ತು ಸೇವೆಗಳ ಉದ್ದೇಶಿತ ವಿತರಣೆ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

5. ವಿತ್ತೀಯ ಕಾರ್ಯಕಲಾಪಗಳು

"2018–19ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ" .

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಬಿ.ಎನ್.ವಿಜಯಕುಮಾರ್, ಶಿವನಗೌಡ ನಾಯಕ್, ಡಿ.ಎನ್. ಜೀವರಾಜ್ ಮತ್ತು ಸಿ.ಟಿ. ರವಿ ಇವರುಗಳು** – ರಾಜ್ಯದಲ್ಲಿ ರೈತರು 2017–18ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ರೈತರಿಂದ ವಿಮೆ ಹಣ ಪಡೆದಿದ್ದು, ಪ್ರಸ್ತುತ ಸಂಕಷ್ಟದಲ್ಲಿರುವ ರೈತರಿಗೆ ಬೆಳೆ ವಿಮೆ ಪರಿಹಾರ ಒದಗಿಸುವ ಬಗ್ಗೆ

   ಹಾಗೂ

   ಶ್ರೀ ಬಸವರಾಜ ಎಸ್. ಬೊಮ್ಮಾಯಿ ಇವರು – ಹಾವೇರಿ ಜಿಲ್ಲೆಯ ರೈತರಿಗೆ ಭತ್ತದ ಬೆಳೆಯ ವಿಮೆ ಹಣ ಪಾವತಿಯಾಗದಿರುವ ಬಗ್ಗೆ ಪ್ರತಿಭಟನೆ ಮಾಡುತ್ತಿರುವ ರೈತರನ್ನು ವಿನಾಕಾರಣ ಬಂಧಿಸುತ್ತಿದ್ದು, ಬೆಳೆ ವಿಮೆ ಪರಿಹಾರ ಹಣವನ್ನು ಕೂಡಲೇ ಬಿಡುಗಡೆ ಮಾಡುವಂತೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

–3–

2) **ಶ್ರೀಯುತರುಗಳಾದ ಹೆಚ್.ಡಿ ಕುಮಾರಸ್ವಾಮಿ, ಹೆಚ್. ಡಿ ರೇವಣ್ಣ, ಕೆ.ಎಂ. ಶಿವಲಿಂಗೇಗೌಡ, ಸಿ.ಬಿ. ಸುರೇಶ್‌ಬಾಬು ಮತ್ತು ಇತರರು** – ಹಾಸನ ಜಿಲ್ಲೆಯ ಹೇಮಾವತಿ, ಯಗಚಿ ಮತ್ತು ವಾಟೇಹೊಳೆ ಜಲಾಶಯಗಳ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ನೀರನ್ನು ಹರಿಸದಿರುವುದರಿಂದ ಬೆಳೆ ನಾಶವಾಗಿದ್ದು, ಅಲ್ಲಿನ ರೈತರಿಗೆ ಪರಿಹಾರ ನೀಡುವ ವಿಷಯದ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

7. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಜಗದೀಶ್ ಶೆಟ್ಟರ ಇವರು** – ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ವೇತನ ಬಡ್ತಿಗಳನ್ನು ಕಡಿತ ಮಾಡುವ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯವರು ಹೊರಡಿಸಿರುವ ಅದೇಶವನ್ನು ರದ್ದು ಪಡಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

2) **ಶ್ರೀ ಸಿ.ಎನ್. ಬಾಲಕೃಷ್ಣ ಇವರು** – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ವಿದ್ಯುತ್ ಪರಿವರ್ತಕಗಳು ಸುಟ್ಟುಹೋಗಿ ಒಂದು ತಿಂಗಳು ಕಳೆದರೂ ಬದಲಿ ವಿದ್ಯುತ್ ಪರಿವರ್ತಕಗಳನ್ನು ಅಳವಡಿಸದೇ ಇರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

3) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ದಾವಣಗೆರೆ ಜಿಲ್ಲೆಯ ಜಿಲ್ಲಾ ಕಾರಾಗೃಹವನ್ನು ಸ್ಥಳಾಂತರ ಮಾಡುವ ಉದ್ದೇಶದಿಂದ ಹರಿಹರ ತಾಲ್ಲೂಕಿನ ಕೊಂಡಜ್ಜಿಯಲ್ಲಿ ಭೂಮಿ ನೀಡಲಾಗಿದ್ದರೂ ಇದುವರೆವಿಗೂ ಕಾರಗೃಹ ಸ್ಥಳಾಂತರ ಮಾಡದೇ ಇರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

4) **ಶ್ರೀಯುತರುಗಳಾದ ಸಿ.ಎನ್. ಬಾಲಕೃಷ್ಣ ಮತ್ತು ಹೆಚ್.ಡಿ. ರೇವಣ್ಣ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಕೆ.ಎಂ. ಶಿವಲಿಂಗೇಗೌಡ ಮತ್ತು ಸಿ.ಎನ್. ಬಾಲಕೃಷ್ಣ ಇವರುಗಳು** – ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಕಟ್ಟೆಬೆಳಗುಲಿ ಗ್ರಾಮದ ಶ್ರೀರಾಮದೇವರ ಅಣೆಕಟ್ಟು ಸುಮಾರು 148 ವರ್ಷಗಳಷ್ಟು ಹಳೆಯದಾಗಿದ್ದು, ಇದಕ್ಕೆ ಪರ್ಯಾಯವಾಗಿ ಹೊಸ ಅಣೆಕಟ್ಟನ್ನು ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

6) **ಶ್ರೀ ಸಿ.ಎನ್. ಬಾಲಕೃಷ್ಣ ಇವರು** – ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ಜನಿವಾರ ಅಮಾನಿಕೆರೆಯಿಂದ ತಾಲ್ಲೂಕಿನ ಇತರೆ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಾಗಿ ವಶಪಡಿಸಿಕೊಳ್ಳಲಾದ ಜಮೀನುಗಳಿಗೆ ಭೂ ಪರಿಹಾರ ನೀಡದೇ ಇರುವುದರಿಂದ ರೈತರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

7) **ಶ್ರೀ ಜಗದೀಶ್ ಶೆಟ್ಟರ ಇವರು** – ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆಯಲ್ಲಿನ ನಿವೃತ್ತ ಅಧಿಕಾರಿ – ನೌಕರರುಗಳಿಗೆ, 2013-14 ರಿಂದ 2017-18ನೇ ಸಾಲಿನ ವರೆಗೆ ಪಿಂಚಣಿ ಹಣವನ್ನು ಪಾವತಿಸದೇ ಇರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

8) **ಶ್ರೀ ಎಸ್.ಟಿ. ಸೋಮಶೇಖರ್ ಇವರು** – ಬೆಂಗಳೂರು ದಕ್ಷಿಣ ತಾಲ್ಲೂಕು ಚಿಕ್ಕಲಿಂಗಶಾಸ್ತ್ರಿ ಕೆರೆ ಏರಿಯಲ್ಲಿ ಕಂದಕ ಉಂಟಾಗಿ ಏರಿಯು ಸೀಳು ಬಿಟ್ಟಿರುವುದರಿಂದ ನೀರು ಜಿನುಗುತ್ತಿದ್ದು ಏರಿ ಒಡೆಯುವ ಸಂಭವವಿರುವುದರಿಂದ ಏರಿಯ ದುರಸ್ಥಿ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ಸಿ.ಟಿ. ರವಿ ಇವರು** – ಚಿಕ್ಕಮಗಳೂರು ಜಿಲ್ಲೆಯಲ್ಲಿ 2016-17ನೇ ಸಾಲಿನಲ್ಲಿ ಬೆಳೆ ವಿಮೆ ಕಂತು ಪಾವತಿಸಿರುವ ರೈತರಿಗೆ ಇದುವರೆವಿಗೂ ಬೆಳೆ ವಿಮೆ ಪಾವತಿಯಾಗದೇ ಇರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

10) **ಶ್ರೀ ಎನ್.ಹೆಚ್. ಕೋನರೆಡ್ಡಿ ಇವರು** – ಧಾರವಾಡ ಜಿಲ್ಲೆಯ ನವಲಗುಂದ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಆರೇಕುರಹಟ್ಟಿ ಗ್ರಾಮ, ಡಾಟನಾಳ, ಅಮರಗೊಳ, ಬಸಪೂರ ಹಾಗೂ ಮಣಕವಾಡ ಗ್ರಾಮಗಳನ್ನು ನೂತನ ಗ್ರಾಮ ಪಂಚಾಯಿತಿ ಎಂದು ಘೋಷಣೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

-5-

11) **ಶ್ರೀ ಕೆ.ಜಿ ಬೋಪಯ್ಯ ಇವರು** – ಕೊಡಗು ಜಿಲ್ಲೆ ಭಗಂಡೇಶ್ವರ ತಲಕಾವೇರಿ ದೇವಾಲಯದ ವ್ಯವಸ್ಥಾಪನಾ ಸಮಿತಿಯ ಸದಸ್ಯರ ನೇಮಕದಲ್ಲಿ ಕರ್ನಾಟಕ ಧಾರ್ಮಿಕ ಪರಿಷತ್ತಿನ ನಿಯಾಮಾವಳಿಗಳ ಉಲ್ಲಂಘನೆಯಾಗಿರುವ ಬಗ್ಗೆ ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

12) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಇವರು** – ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೆ ಒಂದು ರಾಗಿ ಖರೀದಿ ಕೇಂದ್ರವನ್ನು ಸ್ಥಾಪನೆ ಮಾಡುವ ಬಗ್ಗೆ ಘೋಷಣೆ ಮಾಡಿದ್ದರೂ ಇದುವರೆವಿಗೂ ರಾಗಿ ಖರೀದಿ ಕೇಂದ್ರವನ್ನು ಸ್ಥಾಪಿಸದೇ ಇರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

13) **ಶ್ರೀ ವೈ.ಎನ್. ನಾರಾಯಣಸ್ವಾಮಿ ಇವರು** – ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ವತಿಯಿಂದ ಮನೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಹೆಬ್ಬಾಳ ಕ್ಷೇತ್ರದಿಂದ ಆಯ್ಕೆಯಾದ ಫಲಾನುಭವಿಗಳಿಗೆ ಮನೆ ಹಕ್ಕು ಪತ್ರ/ಸ್ವಾಧೀನ ಪತ್ರ ನೀಡದಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

14) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಇವರು** – ಹಾಸನ ಜಿಲ್ಲೆಯ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಿಗೆ ಕುಡಿಯುವ ನೀರಿಗಾಗಿ ವಿಶೇಷ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

15) **ಶ್ರೀ ಕೆ.ಜಿ. ಬೋಪಯ್ಯ ಇವರು** – ಕೊಡಗು ಜಿಲ್ಲೆಯಲ್ಲಿರುವ ಗಿರಿಜನ ಕಾಲೋನಿಗಳಲ್ಲಿ ವಾಸಿಸುವ ಗಿರಿಜನರಿಗೆ ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ ಹಕ್ಕುಪತ್ರ ನೀಡಿದ್ದರೂ ವಿದ್ಯುತ್ ಸಂಪರ್ಕ ಒದಗಿಸಲು ಅರಣ್ಯ ಇಲಾಖೆಯ ಅಧಿಕಾರಿಗಳು ಅಡ್ಡಿಪಡಿಸುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

16) **ಶ್ರೀ ಬಿ. ಸುರೇಶ್‌ಗೌಡ ಇವರು** – ತುಮಕೂರು ತಾಲ್ಲೂಕು ಬೆಳ್ಳಾವಿ ಹೋಬಳಿ, ಮಲ್ಲೇನಹಳ್ಳಿ ಗ್ರಾಮದ ಸರ್ವೆ ನಂ.30 ಮತ್ತು ಗೌಡನಹಳ್ಳಿ ಸರ್ವೆ ನಂ.28ರಲ್ಲಿ ಕೆ.ಐ.ಎ.ಡಿ.ಬಿ. ಸ್ವಾಧೀನಪಡಿಸಿಕೊಂಡಿರುವ ಜಮೀನುಗಳನ್ನು ಹಿಂದಕ್ಕೆ ಪಡೆದು ತಾಲ್ಲೂಕು ಬಗರ್ ಹುಕುಂ ಅಕ್ರಮ-ಸಕ್ರಮ ಸಮಿತಿಯಲ್ಲಿ ಆಗಿರುವ ತೀರ್ಮಾನದಂತೆ ಹಕ್ಕುಪತ್ರ ವಿತರಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

17) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಇವರು** – ಮಹಿಳಾ ಮತ್ತು ಮಕ್ಕಳಾ ಕಲ್ಯಾಣ ಇಲಾಖೆಗಳಲ್ಲಿ ಸಿಬ್ಬಂದಿ ಕೊರತೆಯಿಂದ ಆಡಳಿತಕ್ಕೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

18) **ಶ್ರೀಯುತರುಗಳಾದ ಡಾ|| ಕೆ. ಸುಧಾಕರ್ ಮತ್ತು ಎಸ್.ಎನ್ ಸುಬ್ಬಾರೆಡ್ಡಿ ಇವರುಗಳು** – ದಿನಾಂಕ: 22.03.2017ರಂದು ಹಾಗೂ 05.01.2018ರಂದು ಸರ್ಕಾರವು ಹೊರಡಿಸಿರುವ ಸುತ್ತೋಲೆಗಳಲ್ಲಿನ ಸೂಚನೆಗಳಂತೆ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಹಳೆಯ ಬಡಾವಣೆಗಳಲ್ಲಿನ ನಿವೇಶನಗಳಿಗೆ ಖಾತೆಗಳನ್ನು ನೀಡದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರ ಗಮನ ಸೆಳೆಯುವುದು.

19) **ಶ್ರೀ ಸಾ.ರಾ. ಮಹೇಶ್ ಇವರು** – ಮೈಸೂರು ಜಿಲ್ಲೆ, ಕೆ.ಆರ್.ನಗರ ತಾಲ್ಲೂಕಿನಲ್ಲಿ ದಿನಾಂಕ:26.01.2018ರಂದು ನಡೆದ ಗಣರಾಜ್ಯೋತ್ಸವದ ಕಾರ್ಯಕ್ರಮದಲ್ಲಿ ಕೆ.ಆರ್. ನಗರದ ಆರಕ್ಷಕ ವೃತ್ತ ನಿರೀಕ್ಷಕರು ಭಾಗವಹಿಸದೇ ಇರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

20) **ಡಾ|| ಸಿ.ಎನ್ ಅಶ್ವಥ್ ನಾರಾಯಣ್ ಇವರು** – ರಾಜ್ಯದಲ್ಲಿ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಬಿಪಿಎಲ್ ಪಡಿತರ ಚೀಟಿಗಳನ್ನು ನೀಡಲು ಅರ್ಜಿಗಳನ್ನು ಜೂನ್ 2017ರಲ್ಲಿಯೇ ಪಡೆದಿದ್ದರೂ, ಇದುವರೆವಿಗೂ ಪಡಿತರ ಚೀಟಿಯನ್ನು ವಿತರಿಸದೇ ಇರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವರ ಗಮನ ಸೆಳೆಯುವುದು.

21) **ಶ್ರೀ ಕೆ.ಎಸ್. ಮಂಜುನಾಥ ಗೌಡ ಇವರು** – ಮಾಲೂರು ವಿಧಾನಸಭಾ ಕ್ಷೇತ್ರದ ಟೇಕಲ್ ಹೋಬಳಿಯ ಸುತ್ತಮುತ್ತಲಿನ ಅರಣ್ಯ ಪ್ರದೇಶದಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಸುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

22) **ಶ್ರೀ ಕಳಲೆ ಎನ್. ಕೇಶವಮೂರ್ತಿ ಇವರು** – ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ ಮಾತೃ ಪೂರ್ಣ ಯೋಜನೆಯ ಅನುಷ್ಠಾನ, ಅಂಗನವಾಡಿ ಕೇಂದ್ರಗಳ ನಿರ್ಮಾಣ ಹಾಗೂ ಆಹಾರ ಧಾನ್ಯಗಳನ್ನು ವಿತರಿಸುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

23) **ಶ್ರೀ ಕೆ.ಜಿ. ಬೋಪಯ್ಯ ಇವರು** – ಕೊಡಗು ಜಿಲ್ಲೆಯಲ್ಲಿ ಕಳೆದ ಬಾರಿ ಬಿದ್ದ ಭಾರಿ ಮಳೆಯಿಂದ ರಸ್ತೆಗಳು ಗುಂಡಿ ಬಿದ್ದಿರುವುದರಿಂದ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಗುಂಡಿ ಮುಚ್ಚಲು ಕೂಡಲೇ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

24) **ಡಾ|| ಸಿ.ಎನ್. ಅಶ್ವಥ್ ನಾರಾಯಣ್ ಇವರು** – ಗ್ರಾಮೀಣ ಭಾಗದ ಸರ್ಕಾರಿ ಆಸ್ಪತ್ರೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳನ್ನು ಈ ಹಿಂದೆ ಖಾಯಂಗೊಳಿಸಲಾಗಿದ್ದರೂ, 2016–17ಕ್ಕೆ ಮೂರು ವರ್ಷ ಸೇವೆ ಪೂರ್ಣಗೊಳಿಸಿರುವ ಗುತ್ತಿಗೆ ವೈದ್ಯರನ್ನು ಖಾಯಂಗೊಳಿಸದೇ ಇರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

25) **ಶ್ರೀ ಎಂ. ಕೃಷ್ಣಾರೆಡ್ಡಿ ಇವರು** – ಚಿಕ್ಕಬಳ್ಳಾಪುರ ಜಿಲ್ಲೆಯ ಲೋಕೋಪಯೋಗಿ ಇಲಾಖೆಯಲ್ಲಿ 2016–17 ಮತ್ತು 2017–18ನೇ ಸಾಲುಗಳಲ್ಲಿ ವಿವಿಧ ಯೋಜನೆ/ಲೆಕ್ಕ ಶೀರ್ಷಿಕೆಯಡಿಯಲ್ಲಿ ಕರೆದಿರುವ ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

26) **ಶ್ರೀ ಜಗದೀಶ್ ಶೆಟ್ಟರ್ ಇವರು** – ಧಾರ್ಮಿಕ ಸಂಸ್ಥೆಗಳ ಸುಗಮ ಆಡಳಿತದ ನೆಪ ಹೇಳಿಕೊಂಡು ಸರ್ಕಾರವು ಹೊಸ ಕಾಯ್ದೆ ರಚನೆಗೆ ನಿರ್ಧರಿಸಿದ್ದು, ಅದರಂತೆ ಮಠಗಳು, ಮಠಗಳಿಗೆ ಸೇರಿದ ದೇವಸ್ಥಾನಗಳು, ಮಠಗಳ ನಿಯಂತ್ರಣಕ್ಕೆ ಒಳಪಟ್ಟ ಧಾರ್ಮಿಕ ಸಂಸ್ಥೆಗಳು, ಜೈನ, ಬೌದ್ಧ, ಮತ್ತು ಸಿಖ್ ಜನಾಂಗಕ್ಕೆ ಒಳಪಟ್ಟ ಧಾರ್ಮಿಕ ಸಂಸ್ಥೆಗಳನ್ನು ಧಾರ್ಮಿಕ ದತ್ತಿ ಕಾಯ್ದೆಯ ವ್ಯಾಪ್ತಿಗೆ ತರಲು ಮುಂದಾಗಿರುವ ಕುರಿತು ಮಾನ್ಯ ಜವಳಿ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

27) **ಶ್ರೀ ದೊಡ್ಡನಗೌಡ ಹೆಚ್. ಪಾಟೀಲ ಇವರು** – ಕೊಪ್ಪಳ ಏತ ನೀರಾವರಿ ಯೋಜನೆಯ ಕಾಮಗಾರಿಗೆ 2018–19ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ ಹೆಚ್ಚಿನ ಅನುದಾನ ಒದಗಿಸಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

28) **ಡಾ|| ರಫೀಕ್ ಅಹ್ಮದ್.ಎಸ್ ಇವರು** – ತುಮಕೂರು ನಗರ ವ್ಯಾಪ್ತಿಯ ಜಿ.ಸಿ.ಆರ್. ಕಾಲೋನಿಯ ನಿವಾಸಿಯಾಗಿದ್ದ ನದೀಂ ಪಾಷ ರವರ ಹತ್ಯೆಯಾಗಿದ್ದು, ಅವರ ಕುಟುಂಬ ಆರ್ಥಿಕವಾಗಿ ತುಂಬಾ ಕಷ್ಟದಲ್ಲಿರುವುದರಿಂದ ಅವರಿಗೆ ಗರಿಷ್ಠ ಪರಿಹಾರ ಘೋಷಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

29) **ಶ್ರೀ ಕೆ.ಎಂ. ಶಿವಲಿಂಗೇಗೌಡ ಮತ್ತು ಹೆಚ್.ಡಿ. ರೇವಣ್ಣ ಇವರುಗಳು** – ಹಾಸನ ಜಿಲ್ಲೆಯಲ್ಲಿ 2017–18ನೇ ಸಾಲಿನಲ್ಲಿ ಮರಳು ಗಣಿಗಾರಿಕೆ ನಡೆಸಲು ಪರಿಸರ ಇಲಾಖೆಯ ಅನುಮೋದನೆ ಪಡೆದು ಟೆಂಡರ್ ಕರೆಯಲಾಗಿದ್ದರೂ ಜಿಲ್ಲಾಧಿಕಾರಿಗಳು ಮರಳು ಗಣಿಗಾರಿಕೆ ಪ್ರಾರಂಭಿಸಲು ಇದುವರೆವಿಗೂ ಅನುಮತಿ ನೀಡದೇ ಇರುವುದರಿಂದ ಜಿಲ್ಲೆಯಲ್ಲಿ ಆಶ್ರಯ ಮನೆ, ದೇವಸ್ಥಾನಗಳನ್ನು ನಿರ್ಮಿಸಲು ಹಾಗೂ ಸರ್ಕಾರಿ ಕಾರ್ಯಗಳಿಗೆ ಮರಳು ದೊರೆಯದೇ ತೊಂದರೆಯಾಗಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರ ಗಮನ ಸೆಳೆಯುವುದು.

30) **ಶ್ರೀ ವೈ.ಎ. ನಾರಾಯಣಸ್ವಾಮಿ ಇವರು** – ರಾಜ್ಯಾದ್ಯಂತ ಹಾಗೂ ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಬರುವ ರೆಫರಲ್ ಆಸ್ಪತ್ರೆಗಳು ಸೇರಿದಂತೆ ಭಾರತೀಯ ವೈದ್ಯ ಪದ್ಧತಿಯ ಆಯುಶ್ ಇಲಾಖೆ ಅಡಿಯಲ್ಲಿ ಬರುವ ಆಸ್ಪತ್ರೆಗಳಲ್ಲಿ ಯುನಾನಿ ಘಟಕಗಳನ್ನು ತೆರೆಯುವ ಮತ್ತು ಯುನಾನಿ ಪದವಿ ಪಡೆದ ವೈದ್ಯರನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

31) **ಶ್ರೀ ವೈ.ಎ. ನಾರಾಯಣಸ್ವಾಮಿ ಇವರು** – ಹೆಬ್ಬಾಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿಶ್ವನಾಥ್ ನಾಗೇನಹಳ್ಳಿ ವಾರ್ಡ್ ನಂ. 22ರ ಕನಕ ನಗರದ 1 ರಿಂದ 21 ರಸ್ತೆಗಳು ಡಿ.ಜಿ. ಹಳ್ಳಿಯ ಪೋಲಿಸ್ ಠಾಣೆ ವ್ಯಾಪ್ತಿಗೆ ಸೇರಿದ್ದು, ಆ ಪ್ರದೇಶಗಳನ್ನು ಹೆಬ್ಬಾಳ ಪೋಲಿಸ್ ಠಾಣೆ ವ್ಯಾಪ್ತಿಗೆ ಸೇರಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

32) **ಡಾ|| ಎ.ಬಿ. ಮಾಲಕರೆಡ್ಡಿ ಇವರು** – ಯಾದಗಿರಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ದೇವಾಲಯಗಳ ಜೀರ್ಣೋದ್ಧಾರಕ್ಕೆ 2017–18ನೇ ಸಾಲಿನಲ್ಲಿ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಜವಳಿ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

33) **ಶ್ರೀ ಸಿ.ಟಿ. ರವಿ ಇವರು** – ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕಿನ ಸಕ್ಕರಾಯ ಪಟ್ಟಣ ಹಾಗೂ ಲಕ್ಕಾ ಹೋಬಳಿ ವ್ಯಾಪ್ತಿಯಲ್ಲಿ ಬರುವ ಕೆರೆಗಳಿಗೆ ಭದ್ರಾ ಮೇಲ್ದಂಡೆ ಯೋಜನೆಯಿಂದ ನೀರು ತುಂಬಿಸುವ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತು ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

34) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ಹರಿಹರ ಮತ್ತು ದಾವಣಗೆರೆ ನಗರಗಳಿಗೆ ಕುಡಿಯುವ ನೀರು ಹಾಗೂ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಸಲುವಾಗಿ ತುಂಗಾಭದ್ರ ನದಿಗೆ ಕವಲೆತ್ತು ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

35) **ಶ್ರೀ ವಿ. ಸುನೀಲ್ ಕುಮಾರ್ ಇವರು** – ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಪಡುಬಿದರೆ – ಚಿಕ್ಕಲಗೂಡ ರಾಜ್ಯ ಹೆದ್ದಾರಿ – 1 ರಸ್ತೆ ಅಭಿವೃದ್ಧಿ ಕಾಮಗಾರಿಯು ನಿಧಾನಗತಿಯಿಂದ ನಡೆಯುತ್ತಿರುವ ಹಾಗೂ ಕಳಪೆ ಮಟ್ಟದಲ್ಲಿರುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

36) **ಶ್ರೀ ಹೆಚ್.ಎಸ್. ಶಿವಶಂಕರ್ ಇವರು** – ಹರಿಹರ ವಿಧಾನಸಭಾ ಕ್ಷೇತ್ರದ ಭದ್ರ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಬರುವ ಕಾಲುವೆಗಳನ್ನು ದುರಸ್ಥಿಗೊಳಿಸುವ/ನವೀಕರಣಗೊಳಿಸುವ ಕಾಮಗಾರಿಗಳನ್ನು ಸಕಾಲದಲ್ಲಿ ಕೈಗೊಳ್ಳುವ ಮೂಲಕ ರೈತರ ಬೆಳೆಗೆ ನೀರನ್ನು ಒದಗಿಸುವ ಬಗ್ಗೆ ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

37) **ಶ್ರೀ ಬಿ. ಸುರೇಶ್‌ಗೌಡ ಇವರು** – ತುಮಕೂರು ತಾಲ್ಲೂಕು ಕಣಕುಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 2017–18ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಆಯ್ಕೆಯಾದ 75 ಫಲಾನುಭವಿಗಳ ಪೈಕಿ ಭೌತಿಕ ಪರೀಕ್ಷೆಯ ನಂತರ ವಸತಿ ಯೋಜನೆಯ ಪ್ರಯೋಜನ ಪಡೆಯಲು ಅರ್ಹತೆ ಹೊಂದಿರುವ 73 ಫಲಾನುಭವಿಗಳಿಗೆ ಬಿಲ್ ಪಾವತಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

38) **ಶ್ರೀ ಎಸ್. ಸುರೇಶ್‌ಕುಮಾರ್ ಇವರು** – ಬೆಳಗಾವಿ ಜಿಲ್ಲೆಯ ಖಾನಾಪುರ ತಾಲ್ಲೂಕಿನ ಭೀಮ್‌ಗಡ್ ಸಾಹಸ ಶಿಬಿರದಲ್ಲಿ ನಿರ್ಮಿಸಲಾಗಿರುವ ಇಕೋ ಟೂರಿಸಂ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಡಿ.ಎಸ್.ಎಂ.ಎಸ್. ಸಂಸ್ಥೆಗೆ ಹಣ ಪಾವತಿ ಮಾಡುವಲ್ಲಿ ಮೆ: ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ ಲಿಮಿಟೆಡ್ ಸಂಸ್ಥೆಯವರು ವಿಳಂಬ ಧೋರಣೆ ಅನುಸರಿಸುತ್ತಿರುವ ಬಗ್ಗೆ ಮಾನ್ಯ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm